# ಕರ್ನಾಟಕ ರಾಜ್ಯ ಮಹಿಳಾ ಆಯೋಗ

ನಂ.107, ಕಾವೇರಿ ಭವನ, ಮೊದಲನೇ ಮಹಡಿ, ಕರ್ನಾಟಕ ಗೃಹ ಮಂಡಳಿ ಕಟ್ಟಡ, ಕೆ.ಜಿ. ರಸ್ತೆ, ಬೆಂಗಳೂರು-09,
ದೂರವಾಣಿ ಸಂಖ್ಯೆ:080-22216485/86, ಟೆಲಿಫ್ಯಾಕ್ಸ್: 080-22216485 ಈ-ಮೇಲ್: kscwbang123@gmail.com

ಸಂ:ಕರಾಮಆ/ಸ್ವಪ್ರೇರಿತ-183/2025-26 ದಿನಾಂಕ:29.09.2025

ಗೆ,
ಪೊಲೀಸ್ ಅಧೀಕ್ಷಕರು,
ಪೊಲೀಸ್ ಅಧೀಕ್ಷಕರವರ ಕಛೇರಿ,
ನಂ.5, ಮಿಲ್ಲರ್ಸ್ ರಸ್ತೆ,
ಬೆಂಗಳೂರು ಗ್ರಾಮಾಂತರ ಜಿಲ್ಲೆ,
ಬೆಂಗಳೂರು.

ಮಾನ್ಯರೇ,

**ವಿಷಯ:** ಮಹಿಳೆಯ ಮೇಲೆ ಇನ್ಸ್‌ಪೆಕ್ಟರ್ ದೌರ್ಜನ್ಯ ನಡೆಸಿರುವ ಬಗ್ಗೆ.
**ಉಲ್ಲೇಖ:** ಸಮೂಹ ಮಾಧ್ಯಮಗಳ ವರದಿ ದಿನಾಂಕ:28.09.2025.

**********

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, ಅನ್ಯಾಯಕ್ಕೆ ಒಳಗಾದ ರೈತರ ಪರವಾಗಿ ಕರ್ನಾಟಕ ರಾಷ್ಟ್ರ ಸಮಿತಿ ಕಾರ್ಯಕರ್ತರು ನ್ಯಾಯ ಕೇಳಲು ಮಾದನಾಯಕನಹಳ್ಳಿ ಪೊಲೀಸ್ ಠಾಣೆಗೆ ಹೋದಾಗ, ಸುಳ್ಳು ಕೇಸ್‌ನಲ್ಲಿ ಬಂಧಿಸಿದ್ದು, ಅದನ್ನು ಪ್ರಶ್ನಿಸಲು ತೆರಳಿದ್ದ ಕಾರ್ಯಕರ್ತರಿಗೆ, ನೆಲಮಂಗಲ ಠಾಣೆಯ ಇನ್ಸ್‌ಪೆಕ್ಟರ್ ನರೇಂದ್ರ ಬಾಬು ಮೊಬೈಲ್ ಕಸಿದು, ಬೆದರಿಕೆ ಹಾಕಿದ್ದಲ್ಲದೆ, ವೀಡಿಯೋ ಚಿತ್ರೀಕರಿಸಿದ್ದಕ್ಕೆ ಆಕ್ಷೇಪ ವ್ಯಕ್ತಪಡಿಸಿದ್ದು ಇನ್ನೊಂದೆಡೆ, ಮಾದನಾಯಕನಹಳ್ಳಿ ಪೊಲೀಸ್ ಠಾಣಾ ಇನ್ಸ್‌ಪೆಕ್ಟರ್, ಮಹಿಳೆಯ ಮೊಬೈಲ್ ಕಸಿದುಕೊಂಡು, ಸಾರ್ವಜನಿಕವಾಗಿ ನಡು ರಸ್ತೆಯಲ್ಲಿ ದರದರನೆ ಎಳೆದುಕೊಂಡು ಹೋಗಿ ದೌರ್ಜನ್ಯವೆಸಗಿರುವ ಅಮಾನುಷ ಕೃತ್ಯದ ಬಗ್ಗೆ ವರದಿಯಾಗಿರುತ್ತದೆ. ಮಹಿಳೆಯ ಮೇಲೆ ನಡೆದಿರುವ ದೌರ್ಜನ್ಯವನ್ನು, ರಾಜ್ಯ ಮಹಿಳಾ ಆಯೋಗವು ತೀವ್ರವಾಗಿ ಖಂಡಿಸಿ, ಗಂಭೀರವೆಂದು ಪರಿಗಣಿಸಿರುತ್ತದೆ.

ಆದ್ದರಿಂದ ಸದರಿ ಪ್ರಕರಣದ ಬಗ್ಗೆ ನಿಯಮಾನುಸಾರ ಪರಿಶೀಲಿಸಿ, ಕ್ರಮ ಕೈಗೊಂಡು, ಇದಕ್ಕೆ ಕಾರಣಕರ್ತರಾದವರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಂಡು, ಕೈಗೊಂಡ ಕ್ರಮದ ವರದಿಯನ್ನು ಆಯೋಗಕ್ಕೆ ಅತೀ ಶೀಘ್ರದಲ್ಲಿ ಕಳುಹಿಸಿ ಕೊಡುವಂತೆ ಕೋರಿದೆ.

ತಮ್ಮ ವಿಶ್ವಾಸಿ,

ಕಾರ್ಯದರ್ಶಿ
ಕ.ರಾ.ಮ.ಆ. ಬೆಂಗಳೂರು.